# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1187

2 ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್

3 ಉತ್ತರಿಸಬೇಕಾದ ದಿನಾಂಕ : 20.12.2018

4 ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು,

| | ಪ್ರಶ್ನೆ | ಉತ್ತರ |
|---|---|---|
| ಅ) | ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸಂಪೂರ್ಣ ಸ್ವತಂತ್ರವಾಗಿ ಕಾರ್ಯನಿರ್ವಹಿಸುವ ಪರಮಾಧಿಕಾರ ನೀಡುವ ನಿಟ್ಟಿನಲ್ಲಿ ಸರ್ಕಾರದ ನಿಲುವೇನು; | ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಮಂಡಳಿಯ ಕಾರ್ಯದರ್ಶಿಯವರನ್ನು ಆರ್ಥಿಕ ಇಲಾಖೆಯ ಪತ್ರದ ದಿನಾಂಕ:16.10.2018ರ ಮೂಲಕ ಇಲಾಖಾ ಮುಖ್ಯಸ್ಥರೆಂದು ಘೋಷಣೆ ಮಾಡಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.(ಪ್ರತಿ ಲಗತ್ತಿಸಿದೆ) ಮಂಡಳಿಯು ಅನುಷ್ಠಾನಗೊಳಿಸುತ್ತಿರುವ ಕಾಮಗಾರಿಗಳು ತ್ವರಿತವಾಗಿ ಹಾಗೂ ಸುಗಮವಾಗಿ ಪೂರೈಸುವ ನಿಟ್ಟಿನಲ್ಲಿ ಮಂಡಳಿಯ ಕಾರ್ಯದರ್ಶಿಗಳಿಗೆ ಅಂದಾಜು ಪತ್ರಿಕೆಗಳಿಗೆ ಆಡಳಿತಾತ್ಮಕ ಮಂಜೂರಾತಿ ಆದೇಶವನ್ನು ಈ ಹಿಂದೆ ಇದ್ದಂತೆ ರೂ.2.00 ಕೋಟಿಗಳಿಂದ ರೂ.5.00 ಕೋಟಿಗಳಿಗೆ ಹೆಚ್ಚಿಸಿ ಸರ್ಕಾರದ ಆದೇಶ ಸಂಖ್ಯೆ:ಯೋಇ:12:ಹೈಕವಿ:2017, ಬೆಂಗಳೂರು ದಿನಾಂಕ:25-09-2018ರಲ್ಲಿ ಆದೇಶಿಸಿದೆ. |
| ಆ) | ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಪ್ರತ್ಯೇಕ ಇಂಜಿನಿಯರಿಂಗ್ ವಿಭಾಗ ತೆರೆಯುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; | ಹೈದ್ರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಪುನರ್ ರಚನೆ ಕುರಿತು ಮಂಡಳಿಯ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಇ) | ರಾಜ್ಯದ ಇತರ ಭಾಗದಲ್ಲಿ ಹೈದ್ರಾಬಾದ್-ಕರ್ನಾಟಕ ಭಾಗದವರಿಗೆ ಉದ್ಯೋಗ ಹಾಗೂ ಶಿಕ್ಷಣ ಪ್ರವೇಶಾತಿಯಲ್ಲಿ ಶೇ.8ರ ಮೀಸಲಾತಿ ಸಿಗುತ್ತಿದೆಯೇ?(ವಿವರ ನೀಡುವುದು) | ಕರ್ನಾಟಕ ಸಾರ್ವಜನಿಕ ಉದ್ಯೋಗ(ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013ರ ಕಂಡಿಕೆ-13ರ ಪ್ರಕಾರ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ರಾಜ್ಯ ಮಟ್ಟದ ಕಚೇರಿಗಳು ಅಥವಾ ರಾಜ್ಯ ಮಟ್ಟದ ಸಂಸ್ಥೆಗಳಲ್ಲಿ ಗ್ರೂಪ್-ಎ (ಕಿರಿಯ ಶ್ರೇಣಿ) ವರೆಗಿನ ಹುದ್ದೆಗಳಲ್ಲಿ ಶೇ.8ರಷ್ಟು ಹುದ್ದೆಗಳ ಮೀಸಲಾತಿಯನ್ನು ಕಲ್ಪಿಸಲಾಗಿದೆ. "ರಾಜ್ಯಮಟ್ಟದ ಕಚೇರಿ ಅಥವಾ ಸಂಸ್ಥೆ" ಪದದ ಅರ್ಥ ವಿವರಣೆಯನ್ನು ಕಂಡಿಕೆ-2(1)(ಐ)ರಲ್ಲಿ ವಿವರಿಸಲಾಗಿದ್ದು, ಅದರಂತೆ ರಾಜ್ಯದ ಇತರೆ ಭಾಗದಲ್ಲಿ ಈ ಮೀಸಲಾತಿಯು ಅನ್ವಯವಾಗುವುದಿಲ್ಲ. |

ಸಂಖ್ಯೆ: ಯೋಇ 111 ಹೈಕವಿ 2018

( ಹೆಚ್.ಡಿ.ಕುಮಾರಸ್ವಾಮಿ)

ಮುಖ್ಯಮಂತ್ರಿ